ಕರ್ನಾಟಕ ಸರ್ಕಾರ
ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ,
ಮಲ್ಲೇಶ್ವರಂ 6ನೇ ಅಡ್ಡರಸ್ತೆ, ಬೆಂಗಳೂರು-560003

E-Mail Id: adpigsection@gmail.com Phone No: 080-23460525

ಸಂಖ್ಯೆ: ಕ್ಯೂ5/ಕೆ.ಓ.ಎಸ್/ಏಪ್ರಿಲ್‌ಮುಖ್ಯಪರೀಕ್ಷೆ/2024/09/2023-24 ದಿನಾಂಕ: 06/05/2024

## ಸುತ್ತೋಲೆ

**ವಿಷಯ:** ಮೇ-2024 ಮಾಹೆಯಲ್ಲಿ ನಡೆಯಲಿರುವ ಕರ್ನಾಟಕ ಮುಕ್ತ ಶಾಲೆ (ಕೆ.ಓ.ಎಸ್) ಮುಖ್ಯ ಪರೀಕ್ಷೆಗೆ ಹಾಜರಾಗುತ್ತಿರುವ ಅಭ್ಯರ್ಥಿಗಳ ಪ್ರವೇಶ ಪತ್ರ ಡೌನ್‌ಲೋಡ್ ಮಾಡಿಕೊಳ್ಳುವ ಬಗ್ಗೆ.

******

ಮೇ-2024 ಮಾಹೆಯಲ್ಲಿ ನಡೆಯುವ ಕರ್ನಾಟಕ ಮುಕ್ತ ಶಾಲೆ (ಕೆ.ಓ.ಎಸ್) ಮುಖ್ಯ ಪರೀಕ್ಷೆಯು ದಿನಾಂಕ: 20/05/2024 ರಿಂದ ದಿನಾಂಕ:29/05/2024 ರವರೆಗೆ ನಡೆಸಲಾಗುತ್ತಿದೆ. ಸದರಿ ಪರೀಕ್ಷೆಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ಮಂಡಳಿಯ ಜಾಲತಾಣ https://kseab.karnataka.gov.in ಲಭ್ಯವಿರುವಂತೆ ಕ್ರಮ ಕೈಗೊಳ್ಳಲಾಗಿದೆ. ಮಂಡಳಿಯ ಜಲತಾಣದಲ್ಲಿ ಪ್ರವೇಶ ಪತ್ರಗಳನ್ನು ಸಂಬಂಧಿಸಿದ ಕಲಿಕಾ ಕೇಂದ್ರಗಳ ಲಾಗಿನ್‌ಗಳಲ್ಲಿ ಡೌನ್‌ಲೋಡ್ ಮಾಡಿಕೊಂಡು ಪರಿಶೀಲಿಸಿ ವಿತರಿಸಲು ಈ ಕೆಳಕಂಡಂತೆ ಕ್ರಮವಹಿಸುವುದು.

1. ಕಲಿಕಾ ಕೇಂದ್ರದ ಸಮನ್ವಯಾಧಿಕಾರಿಗಳು INSTITUTE LOGIN ನಲ್ಲಿ ತಮ್ಮ ಸಂಸ್ಥೆಯ USER NAME ಹಾಗೂ PASS WORD ಬಳಸಿ ಎಲ್ಲಾ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ಡೌನ್ ಲೋಡ್ ಮಾಡಿಕೊಂಡು ಪರಿಶೀಲಿಸಿ ವಿತರಿಸುವುದು.
2. ಕಲಿಕಾ ಕೇಂದ್ರದಿಂದ ನೋಂದಾಯಿಸಿದ ಅಭ್ಯರ್ಥಿಗಳ ಸಂಖ್ಯೆಗೆ ಅನುಸಾರ ನಿಮ್ಮ ಕಲಿಕಾ ಕೇಂದ್ರದ ಸ್ವೀಕೃತವಾದ ಪ್ರವೇಶ ಪತ್ರಗಳ ಸಂಖ್ಯೆಗಳು ತಾಳೆಯಾಗುತ್ತಿರುವ ಬಗ್ಗೆ ಪರಿಶೀಲಿಸಿಕೊಳ್ಳುವುದು. ಒಂದು ವೇಳೆ ತಾಳೆ ಹೊಂದದಿದ್ದಲ್ಲಿ ಯಾವ ಅಭ್ಯರ್ಥಿಯ ಪ್ರವೇಶ ಪತ್ರ ಬಂದಿಲ್ಲವೆಂಬುದನ್ನು ಖಚಿತಪಡಿಸಿಕೊಂಡು ಅಗತ್ಯ ಕ್ರಮಕ್ಕಾಗಿ ಸಮರ್ಥನೆಯೊಂದಿಗೆ/ದಾಖಲೆಗಳನ್ನು ಕಳುಹಿಸಿಕೊಡುವುದು.

3 .ಕಲಿಕಾ ಕೇಂದ್ರದ ಸಂಕೇತ ಹಾಗೂ ಸಂಸ್ಥೆಯ ಹೆಸರಿನಲ್ಲಿ ಏನಾದರೂ ವ್ಯತ್ಯಾಸ ಕಂಡು ಬಂದಲ್ಲಿ ಸಮರ್ಥನೆಯೊಂದಿಗೆ ಮಂಡಳಿಗೆ ಕಳುಹಿಸಿಕೊಡುವುದು. ಕಲಿಕಾ ಕೇಂದ್ರದಿಂದ ಅಪ್ ಲೋಡ್ ಮಾಡಿರುವಂತೆ ಅಭ್ಯರ್ಥಿಗಳ ಮಾಹಿತಿಗಳು, ಭಾವಚಿತ್ರ ಮತ್ತು ಸಹಿಯನ್ನು ಪ್ರವೇಶ ಪತ್ರದಲ್ಲಿ ಮುದ್ರಿಸಲಾಗಿದೆ. ಒಂದು ವೇಳೆ ಏನಾದರೂ ತಪ್ಪುಗಳು ಕಂಡು ಬಂದಲ್ಲಿ ಕೂಡಲೇ ಶಾಖಾಧಿಕಾರಿಗಳು ಕ್ಯೂ ಶಾಖೆ ರವರ ಗಮನಕ್ಕೆ ತಂದು ಸರಿಪಡಿಸಿಕೊಳ್ಳುವುದು.

4. ಪ್ರವೇಶ ಪತ್ರದಲ್ಲಿ ಹಾಗೂ ಕೇಂದ್ರ ನಾಮ ಪಟ್ಟಿಯಲ್ಲಿ ಭಾವಚಿತ್ರ ಇಲ್ಲದೇ ಇರುವ ಅಭ್ಯರ್ಥಿಗೆ ಪರೀಕ್ಷೆ ಬರೆಯಲು ಅನುಮತಿ ನೀಡಲಾಗುವುದಿಲ್ಲ. ಇದರಿಂದ ಅಭ್ಯರ್ಥಿಗೆ ಆಗುವ ತೊಂದರೆಗೆ ಸಂಬಂಧಿಸಿದ ಕಲಿಕಾ ಕೇಂದ್ರದ ಸಮನ್ವಯಾಧಿಕಾರಿಗಳು ಜವಾಬ್ದಾರರಾಗಿರುತ್ತಾರೆ ಎಂದು ಸ್ಪಷ್ಟ ಪಡಿಸಿದೆ.

5. ಯಾವುದೇ ಅಭ್ಯರ್ಥಿಯ ಭಾವಚಿತ್ರ ಬದಲಾವಣೆಗೆ ಸಂಬಂಧಿಸಿದಂತೆ, ಪರೀಕ್ಷೆಗೆ ಮುಂಚೆ ಮಾಡಲಾದ ಬದಲಾವಣೆಗಳನ್ನು ಮಾತ್ರ ಮಂಡಳಿಯು ಪರಿಗಣಿಸುತ್ತದೆ. ಕೇಂದ್ರ ನಾಮಪಟ್ಟಿಯಲ್ಲಿ ಯಾವುದೇ ಬದಲಾವಣೆಗಳನ್ನು ಮಾಡದೆ ಇದ್ದಲ್ಲಿ ನಾಮಪಟ್ಟಿಯಲ್ಲಿರುವ ಭಾವಚಿತ್ರದ ಅಭ್ಯರ್ಥಿಯೇ ನೈಜ ಅಭ್ಯರ್ಥಿ ಎಂದು ಪರಿಗಣಿಸಲಾಗುವುದು. ಪರೀಕ್ಷಾ ನಂತರದಲ್ಲಿ ಬರುವ ಅಭ್ಯರ್ಥಿಗಳ ಭಾವಚಿತ್ರ ಬದಲಾವಣೆ ಕುರಿತ ಯಾವುದೇ ಮನವಿಗಳನ್ನು ಮಂಡಳಿ ಪುರಸ್ಕರಿಸುವುದಿಲ್ಲ. ಇದಕ್ಕೆ ಸಂಬಂಧಿಸಿದ ಕಲಿಕಾ ಕೇಂದ್ರದ ಪ್ರಾಂಶುಪಾಲರು ಹಾಗೂ ಪರೀಕ್ಷಾ ಕೇಂದ್ರದ ಅಧೀಕ್ಷಕರುಗಳೇ ನೇರ ಜವಾಬ್ದಾರರಾಗಿರುತ್ತಾರೆ. **ಈ ರೀತಿ ಆದಲ್ಲಿ ಬದಲಿ ಅಭ್ಯರ್ಥಿ ಪರೀಕ್ಷೆ ಬರೆಯಲು ಸಹಕರಿಸಿ ಪರೀಕ್ಷಾ ಅವ್ಯವಹಾರದಲ್ಲಿ ಭಾಗಿಯಾಗಿರುತ್ತೀರೆಂದು ಪರಿಗಣಿಸಿ ಸಂಬಂಧಿಸಿದ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರ ಮೇಲೆ ಕೆ.ಸಿ.ಎಸ್.ಆರ್ (ಸಿ.ಸಿ.ಎ) ನಿಯಮ-1957 ಮತ್ತು 1983 ರ ಕರ್ನಾಟಕ ಶಿಕ್ಷಣ ಕಾಯ್ದೆ ಹಾಗೂ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ಕಾಯ್ದೆ-1966 ರನ್ವಯ ಕ್ರಮ ಜರುಗಿಸಲಾಗುವುದು.**

6. ಪ್ರವೇಶ ಪತ್ರದಲ್ಲಿ ನೀಡಲಾಗಿರುವ ಸೂಚನೆಗಳನ್ನು ಪಾಲಿಸಲು ಅಭ್ಯರ್ಥಿಗಳಿಗೆ ಅಗತ್ಯವಾದ ಮಾಹಿತಿಯನ್ನು ನೀಡುವುದು.
7. ಕರಡು ಪ್ರವೇಶ ಪತ್ರವನ್ನು ತಿದ್ದುಪಡಿಗೆ ಈಗಾಗಲೇ ಅವಕಾಶ ನೀಡಿದ್ದು, ಅಂತಿಮ ಪ್ರವೇಶ ಪತ್ರದಲ್ಲಿನ ಅಭ್ಯರ್ಥಿಗಳ ಮಾಹಿತಿ ತಿದ್ದುಪಡಿಗೆ ಯಾವುದೇ ಅವಕಾಶವಿರುವುದಿಲ್ಲ.
8. ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಪ್ರವೇಶ ಪತ್ರದಲ್ಲಿ ಪರೀಕ್ಷೆಗೆ ಹಾಜರಾಗುವ ವಿಷಯದ ಮುಂದೆ ನಮೂದಿಸಿರುವ ವಿಷಯ ಸಂಕೇತ ಖಚಿತ ಪಡಿಸಿಕೊಳ್ಳುವುದು. ಪರೀಕ್ಷಾ ದಿನಾಂಕ ಪ್ರಾರಂಭವಾದ ವೇಳೆ 10:00 ಗಂಟೆಯ ನಂತರ ಪ್ರವೇಶ ಪತ್ರಗಳನ್ನು Down Load ಮಾಡಿಕೊಳ್ಳಲು ಸಾಧ್ಯವಾಗುವುದಿಲ್ಲ.

ಮೇಲ್ಕಂಡ ಅಂಶಗಳಂತೆ ನಿಮ್ಮ ಸಂಸ್ಥೆಯ ಎಲ್ಲಾ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ಆದ್ಯತೆ ಮೇರೆಗೆ ಕಡ್ಡಾಯವಾಗಿ ಪರಿಶೀಲಿಸಿಕೊಳ್ಳುವುದು.

**ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ನಿರ್ದೇಶಕರು, ಕೆ.ಓ.ಎಸ್ ವಿಭಾಗ, 4ನೇ ಮಹಡಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003, ಮೊಬೈಲ್ ಸಂಖ್ಯೆ:9986312959 ಮಂಡಳಿಯ ಸಹಾಯವಾಣಿ ಸಂಖ್ಯೆ: 080-23310075 ಹಾಗೂ ಇ-ಮೇಲ್ ವಿಳಾಸ:** adpiqsection@gmail.com **ಸಂಪರ್ಕಿಸುವುದು.**

(ಗೋಪಾಲಕೃಷ್ಣ.ಹೆಚ್.ಎನ್.)
ನಿರ್ದೇಶಕರು,(ಪರೀಕ್ಷೆಗಳು)
ಕೆ.ಎಸ್.ಇ.ಎ.ಬಿ

**ಇವರಿಗೆ:**
1. ರಾಜ್ಯದ ಎಲ್ಲಾ ಕಲಿಕಾ ಕೇಂದ್ರಗಳ ಸಮನ್ವಯಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು/ನೋಡಲ್ ಅಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ.
3. ಸಂಬಂಧಿಸಿದ ಡಯಟ್ ಪ್ರಾಂಶುಪಾಲರಿಗೆ ಮಾಹಿತಿಗಾಗಿ.
4. ಶಾಖಾಧಿಕಾರಿಗಳು, ಗಣಕಶಾಖೆ ಇವರಿಗೆ ಈ ಸುತ್ತೋಲೆಯನ್ನು ಅಂತರ್ ಜಾಲದಲ್ಲಿ ಪ್ರಕಟಿಸುವುದು.
5. ಕಛೇರಿ ಪ್ರತಿ.